ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 17–08–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | **5 Day Capacity Enhancement Programme for NSME Officials on Law of Trademark and Designs.**<br><br>**Inauguration:**<br><br>**Justice Mrs. Rathnakala, Judge of High Court of Karnataka.**<br><br>**Chief Guest:**<br><br>**Mr. Mohammed Mohsin, Managing Director, Karnataka State Small Industries Development Corporation.** | 18–8–2015<br>**Tuesday at 9-00 AM** | **National Law School of India University , Nagarabhavi, Bengaluru.** |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಸಾರಿಗೆ ಅದಾಲತ್

ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ)

ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಕಚೇರಿ, ಬೆಂಗಳೂರು (ದಕ್ಷಿಣ) ಜಯನಗರ, ಇಲ್ಲಿ ಆಗಸ್ಟ್ 18 ರಂದು ಮಧ್ಯಾಹ್ನ 3–00 ಗಂಟೆಗೆ ಸಾರಿಗೆ ಅದಾಲತ್‌ನ್ನು ಕಚೇರಿಯ 2ನೇ ಮಹಡಿಯ ಆಡಿಟೋರಿಯಂನಲ್ಲಿ ಏರ್ಪಡಿಸಲಾಗಿದೆ.

ಅದಾಲತ್‌ನಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಸಾರ್ವಜನಿಕರು ಸಾರಿಗೆ ಇಲಾಖೆಗೆ ಸಂಬಂಧಿಸಿದ ಅಹವಾಲು ಮತ್ತು ಕುಂದುಕೊರತೆಗಳ ಪರಿಹಾರಕ್ಕಾಗಿ ಈ ಅವಕಾಶವನ್ನು ಉಪಯೋಗಿಸಿಕೊಳ್ಳಲು ಕೋರಿದೆ.

ಬಾಬು:ಜಿಪಿಆರ್.

# SARIGE ADALAT

## Bengaluru, Aug 17th (Karnataka Information)

**Sarige Adalat willl be held on Tuesday 18-8-2015 at 3.00 PM in the 2md floor, Auditiorium by the Office of the Deputy Commissioner for Transport and Senior Regional Transport Officer, Bengaluru (South) Jayanagar. Senior Officers of the Transport Department will be participating in the adalat. Publics are requested to avail this opportunity for redressal of their grievances, if any in the adalat.**

## babu:gpr

# Balavedike Programme

**Bengaluru, Aug 17th (Karnataka Information)**

**Bal Bhavan has organised Bala Vedhike programme for children in the age group of 05-16 years, on every Saturday and Sundays between 04-30 pm to 06-00 pm from 15-08-2015 to 28-02-2016. Aim of the programmes is to identify and encourage the hidden talent.**

**Applications are invited in the Creative Arts (Painting Crafts, clay modelling) Creative Writing, (Poetry, Short Stories) Creative, Performance (different styles of Dance, Vocal, instrumental Music, Yakshagana, Drama,**

Dance in Yoga and Skating styles etc,) Creative Scientific innovation (Display Model with details). Children's institutions in the concerned field are also invited to apply for the same. Bal Bhavan will provide stage for budding artists and honour them with incentive and participatory Certificate.

Interested chidren and institutions are requested to kindly, contact. The Office of the Secretary, Bal Bhavan, Cubbon Park, Bangalore, for more details and registration in person or through the telephone No. 080-22861423/22864189.

**babu:gpr**

## ಚುನಾವಣೆಗೆ ಮಕ್ಕಳ ಬಳಕೆ ಬೇಡ

ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ದಿನಾಂಕ 22-08-2015 ರಂದು ಚುನಾವಣೆಯ ನಿಗದಿಯಾಗಿರುತ್ತದೆ. ಶಾಲೆಗೆ ಹೋಗುವ ಮಕ್ಕಳನ್ನು ಚುನಾವಣೆಯ ಪ್ರಚಾರಕ್ಕಾಗಿ ಮತ್ತು ಮತದಾನ ಜಾಗೃತಿಯ ಜಾಥಾಗಳಲ್ಲಿ ಬಳಸಿಕೊಳ್ಳುವ ಸಂಭವವಿರುತ್ತದೆ. ಇದರಿಂದ ಮಕ್ಕಳ ಹಕ್ಕುಗಳ ಉಲ್ಲಂಘನೆಯನ್ನು ಮಾಡಿದಂತಾಗುತ್ತದೆ.

ಈ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಮಕ್ಕಳನ್ನು ಬಳಸಿಕೊಳ್ಳದಿರುವಂತೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ವಿನಂತಿಸಿದೆ.

ಬಾಬು:ಜಿಪಿಆರ್.

## ಬಾಲವೇದಿಕೆ ಕಾರ್ಯಕ್ರಮ

ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ)

ಬಾಲ ಭವನವು 05-16 ವರ್ಷದ ಮಕ್ಕಳಲ್ಲಿ ಸುಪ್ತ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಅನುವಾಗುವಂತೆ, "ಬಾಲ ವೇದಿಕೆ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಉದ್ದೇಶಿಸಿದೆ. ಪ್ರತಿ ಶನಿವಾರ ಹಾಗೂ ಭಾನುವಾರಗಳಂದು ದಿನಾಂಕ: 15-08-2015 ರಿಂದ ದಿನಾಂಕ 28-02-2016 ರವರೆಗೆ ಸಂಜೆ 4-30 ರಿಂದ 5-30 ರವರೆಗೆ ಕಾರ್ಯಕ್ರಮವನ್ನು ಏರ್ಪಡಿಸಲಾಗುವುದು. ಸೃಜನಾತ್ಮಕ ಕಲೆ (ಚಿತ್ರಕಲೆ, ಕರಕುಶಲಕಲೆ, ಜೇಡಿಮಣ್ಣಿನ ಕಲೆ) ಸೃಜನಾತ್ಮಕ ಬರವಣಿಗೆ (ಕಥೆ, ಕವನ) ಸೃಜನಾತ್ಮಕ ಪ್ರದರ್ಶನ ಕಲೆ, ನೃತ್ಯ, ಸಂಗೀತ, ವಾದ್ಯ ಸಂಗೀತ, ನಾಟಕ, ಯಕ್ಷಗಾನ, ಜಾನಪದ ಗೀತೆ/ನೃತ್ಯ ಯೋಗದೊಂದಿಗೆ ನೃತ್ಯ, ಸ್ಕೇಟಿಂಗ್‌ನೊಂದಿಗೆ ನೃತ್ಯ, ಮ್ಯಾಜಿಕ್ ಇತ್ಯಾದಿ) ವಿಜ್ಞಾನದಲ್ಲಿ ಸೃಜನಾತ್ಮಕ ಆವಿಷ್ಕಾರ (ಮಾದರಿಗಳ ಪ್ರದರ್ಶನ ಹಾಗೂ ವಿವರಣೆ) ಈ ಕ್ಷೇತ್ರದಲ್ಲಿರುವ ಮಕ್ಕಳಿಗೆ ಹಾಗೂ ಮಕ್ಕಳ ನೃತ್ಯ ಸಂಗೀತ ಸಂಸ್ಥೆಗಳಿಗೂ ಸಹ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶ ಕಲ್ಪಿಸಲಾಗಿದೆ. ಕಾರ್ಯಕ್ರಮ/ಪ್ರದರ್ಶನ ನೀಡುವ ಮಕ್ಕಳಿಗೆ ಅಥವಾ ಮಕ್ಕಳ ನೃತ್ಯ/ಸಂಗೀತ/ರಂಗ

ಸಂಸ್ಥೆಗಳಿಗೆ ಉಚಿತ ವೇದಿಕೆ ಪ್ರೋತ್ಸಾಹ ಧನ ಹಾಗೂ ಪ್ರಮಾಣ ಪತ್ರವನ್ನು ನೀಡುವುದರೊಂದಿಗೆ ಗೌರವಿಸಲಾಗುವುದು.

ಆಸಕ್ತರು, ಹೆಚ್ಚಿನ ಮಾಹಿತಿಗಾಗಿ ಕಾರ್ಯದರ್ಶಿಗಳ ಕಚೇರಿ, ಬಾಲ ಭವನ, ಕಬ್ಬನ್ ಉದ್ಯಾನವನ, ಬೆಂಗಳೂರು, ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080-22861423/22864189 ಮೂಲಕ ಸಂಪರ್ಕಿಸಲು ಕೋರಿದೆ.

ಬಾಬು:ಜಿಪಿಆರ್

## ರಾಜ್ಯ ಮಟ್ಟದ ರೈತ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ)

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು ಆಸಕ್ತ ರೈತ ಹಾಗೂ ರೈತ ಮಹಿಳೆಯರಿಂದ ಈ ಕೆಳಕಂಡ ರಾಜ್ಯಮಟ್ಟದ ಪ್ರಶಸ್ತಿಗಳಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಡಾ. ಎಂ.ಹೆಚ್.ಮರೀಗೌಡ ರಾಜ್ಯಮಟ್ಟದ ಅತ್ಯುತ್ತಮ ತೋಟಗಾರಿಕ ರೈತ ಪ್ರಶಸ್ತಿ, ಲೇಟ್ ಸಿ. ಬೈರೇಗೌಡ ಸ್ಮಾರಕ ರಾಜ್ಯ ಮಟ್ಟದ ಅತ್ಯುತ್ತಮ ರೈತ ಪ್ರಶಸ್ತಿ. ಈ ಪ್ರಶಸ್ತಿಗಳನ್ನು ವಿಶ್ವವಿದ್ಯಾನಿಲಯವು, ನವೆಂಬರ್ ತಿಂಗಳಲ್ಲಿ ಆಯೋಜಿಸಲಿರುವ ಕೃಷಿಮೇಳ-2015 ರ ಸಂದರ್ಭದಲ್ಲಿ ನೀಡಲಾಗುವುದು. ನಿಗದಿತ ಅರ್ಜಿ ನಮೂನೆಯನ್ನು ಆಯಾ ಜಿಲ್ಲೆಗಳ ಜಂಟಿ ಕೃಷಿ ನಿರ್ದೇಶಕರವರ ಕಚೇರಿ, ಜಿಲ್ಲಾ ತೋಟಗಾರಿಕಾ ಅಧಿಕಾರಿಗಳ ಕಚೇರಿ, ವಿಸ್ತರಣಾ ನಿರ್ದೇಶನಾಲಯ, ಹೆಬ್ಬಾಳ , ಬೆಂಗಳೂರು ಕೃಷಿ ವಿಜ್ಞಾನ ಕೇಂದ್ರಗಳು ಮತ್ತು ವಿಸ್ತರಣಾ ಶಿಕ್ಷಣ ಘಟಕಗಳಲ್ಲಿ ದೊರೆಯುತ್ತದೆ. ಅಲ್ಲದೇ ಅರ್ಜಿ ನಮೂನೆಯ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲೂ www.uasbangalore.edu.in ಲಭ್ಯವಿರುತ್ತದೆ.

ಭರ್ತಿಮಾಡಿದ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ 10-10-2015 ಆಗಿರುತ್ತದೆ. ಹೆಚ್ಚಿನ ವಿವರಗಳಿಗೆ ವಿಸ್ತರಣಾ ನಿರ್ದೇಶಕರ ಕಚೇರಿ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024 ಇವರನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ 080 – 23418883.

ಬಾಬು:ಜಿಪಿಆರ್.

## APPLICATION INVITED FOR FARMER AWARDS

**Bangalore, Aug 17th (Karnataka Information)**

**The University of Agircultural Sciences, Bangalore has invited applications for the State level Dr. M.H. Marigowda, Best Horticulture Farmer Award and Late. C. Byregowda State Level Best Farmer Award. The award will be conferred during Krishimela-2015. The prescribed application forms can be obtained from the office of the Joint Directors of Agriculture. District Horticulture Office of respective districts or Programme Coordinators of Krishi Vigyan Kendras or Extension Education Unit or from the office of the undersigned. The application can also be downloaded from**

the university website www.uasbangalore.educ.in. the last date for submission of duly filled in application form is 10-10-2015.

For further information please contact office of the Director ofExtension UAS, Hebbal, Bangalore – 560 024. Phone No. 080 – 23418883.

babu:gpr

## ಸಂದರ್ಶನ

ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪ ಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಕಲಾ ಮತ್ತು ಕ್ರಾಪ್ಟ್ ಶಿಕ್ಷಕರ ಹುದ್ದೆಗಳಿಗೆ ದಿನಾಂಕ 19–08–2015 ಮತ್ತು 20–08–2015 ರಂದು ಸಂದರ್ಶನವನ್ನು ಆಯೋಗದ ಕೇಂದ್ರ ಕಚೇರಿ, ಉದ್ಯೋಗ ಸೌಧ, ಬೆಂಗಳೂರು – 560 001 ರಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಸಂದರ್ಶನಕ್ಕೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿ, ಸಂದರ್ಶನದ ವೇಳೆ, ದಿನಾಂಕ ಇತ್ಯಾದಿ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ "http://kpsc.kar.nic.in" ಅನ್ನು ನೋಡಬಹುದು. ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಪತ್ರ ಸ್ವೀಕೃತವಾಗದಿದ್ದಲ್ಲಿ ಸಂಬಂಧಿತ ದಾಖಲೆಗಳೊಂದಿಗೆ ಆಯೋಗದ ಕಚೇರಿಯನ್ನು ಸಂದರ್ಶನಕ್ಕೆ ನಿಗದಿಪಡಿಸಿರುವ ದಿನಾಂಕದೊಳಗೆ ಸಂಪರ್ಕಿಸಬಹುದು.

[

ಬಾಬು:ಜಿಪಿಆರ್.

## INTERVIEW

Bangalore, Aug 17th (Karnataka Information)

Karnataka Public Service Commission will be conducting interview for recruitment to Act and Craft Teacher in Morarji Desai Residential Schools in the Department of Minorities Welfare, on 19-08-2015 and 20-08-2015 at the Commissikon's Head Office, Udyoga Soudha, Bangalore – 560 001.

Interview notices to all eligible candidates have already been dispatched. For more details, regarding the list of candidates eligible for interview, date and time of interview. candidates may visit the Commission's Web Site "http://kpsc.kar.nic.in". In case eligible candidates, do not receive interview notices, they may contact the Head Office with relevant documents within the prescribed interview date.

babu:gpr.

# ಚುನಾವಣೆ ದಿನ ರಜೆ ಘೋಷಣೆ

ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ)

ಬೃಹತ್ ಬೆಂಗಳೂರು ಮಹಾನಗರಪಾಲಿಕೆ 198 ವಾರ್ಡ್‌ಗಳಿಗೆ ಆಗಸ್ಟ್ 22 ರ ಶನಿವಾರದಂದು ಸಾರ್ವತ್ರಿಕ ಚುನಾವಣೆ ನಡೆಯಲಿದ್ದು, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರಾಜ್ಯ ಸರ್ಕಾರಿ ಕಚೇರಿಗಳಿಗೆ, ಕೇಂದ್ರ ಸರ್ಕಾರದ ಕಚೇರಿಗಳಿಗೆ, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಖಾನೆ, ಕೈಗಾರಿಕೆ ಸಂಸ್ಥೆಗಳಿಗೆ, ಶಿಕ್ಷಣ ಸಂಸ್ಥೆಗಳಿಗೆ, ಅನುದಾನಿತ ಶಿಕ್ಷಣ ಸಂಸ್ಥೆಗಳು ಸೇರಿದಂತೆ, ಶಾಲಾ-ಕಾಲೇಜುಗಳಿಗೆ ಸರ್ಕಾರವು ಸಾರ್ವತ್ರಿಕ ರಜೆ ಘೋಷಿಸಿದೆ.

ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ವ್ಯಾಪ್ತಿಗೆ ಸಂಬಂಧಿಸಿದಂತೆ ನೆಗೋಷೀಯೆಬಲ್ ಇನ್‌ಸ್ಟ್ರುಮೆಂಟ್ ಆಕ್ಟ್ ಪ್ರಕಾರ ರಜೆ ಘೋಷಿಸಲಾಗಿದೆ.

ಮತದಾನವು ಸುಸೂತ್ರವಾಗಿ ನಡೆಯಲು ಅನುಕೂಲವಾಗುವಂತೆ ಮತದಾನ ನಡೆಯುವ ಮತಗಟ್ಟೆಗಳನ್ನು ಸರ್ಕಾರಿ ಕಚೇರಿಗಳಲ್ಲಿ ಹಾಗೂ ಸರ್ಕಾರಿ ಶಾಲೆಗಳಲ್ಲಿ ಸ್ಥಾಪಿಸಿದ್ದಲ್ಲಿ ಅಂತಹ ಕಚೇರಿ ಹಾಗೂ ಶಾಲೆಗಳಿಗೆ ಮತದಾನ ಮುನ್ನ ದಿನವಾದ ಆಗಸ್ಟ್ 21 ರಂದು ಪೂರ್ವ ತಯಾರಿಗಾಗಿ ಹಾಗೂ ಮತಎಣಿಕೆ ನಡೆಯುವ ಕೇಂದ್ರಕ್ಕೆ ಮತಎಣಿಕೆ ದಿನದಂದು ಮಾತ್ರ ರಜೆ ಘೋಷಿಸಲಾಗಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧೀನ ಕಾರ್ಯದರ್ಶಿ ಡಾ. ಬಿ.ಎಸ್. ಮಂಜುನಾಥ ಸ್ವಾಮಿ ತಿಳಿಸಿದ್ದಾರೆ.

ಬಾಬು:ಜಿಪಿಆರ್.